ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

ಕಡತ ಸಂ:ಸಿಪಿಇ(2)/ಪಾದರಕ್ಷೆ (ಷೂ)-06/2018-19 ದಿನಾಂಕ:07.08.2019

**"ಅತೀ ತುರ್ತು"**

**- ಜ್ಞಾಪನಾ -**

ವಿಷಯ:- 2019-20ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೆ ಷೂ ಮತ್ತು ಸಾಕ್ಸ್ ಖರೀದಿ ಬಗ್ಗೆ ಎಸ್.ಎ.ಟಿ.ಎಸ್. ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಆದೇಶ ಸಂಖ್ಯೆ: ಇಡಿ 134 ಯೋಯೋಕ 2018 ದಿನಾಂಕ:06-05-2019
2. ಈ ಕಛೇರಿ ಸುತ್ತೋಲೆ ದಿನಾಂಕ: 21-06-2019
3. ಈ ಕಛೇರಿ ಜ್ಞಾಪನ ದಿನಾಂಕ: 24.07.2019

2019-20ನೇ ಶೈಕ್ಷಣಿಕ ಸಾಲಿಗೆ ರಾಜ್ಯದಲ್ಲಿ ಶಿಕ್ಷಣ ಇಲಾಖೆಯ ವತಿಯಿಂದ ನಡೆಸಲ್ಪಡುವ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡಲಿರುವ ಅಂದಾಜು 43.61 ಲಕ್ಷ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಉಚಿತವಾಗಿ ಒಂದು ಜೊತೆ ಷೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಮುಖಾಂತರ ಖರೀದಿಸಿ ವಿತರಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉಲ್ಲೇಖ-[1]ರ ಸರ್ಕಾರದ ಆದೇಶದಲ್ಲಿ ಸೂಚಿಸಲಾಗಿದೆ.

ಸರ್ಕಾರದ ಆದೇಶದನ್ವಯ ಈ ಕಚೇರಿ ವತಿಯಿಂದ ಉಲ್ಲೇಖ-[2]ರ ಸುತ್ತೋಲೆಯಲ್ಲಿ ಒಂದು ಜೊತೆ ಷೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಖರೀದಿ ಪ್ರಕ್ರಿಯೆ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರನ್ವಯ ಷೂ ಮತ್ತು ಸಾಕ್ಸ್‌ಗಳ ಖರೀದಿ ಪ್ರಕ್ರಿಯೆಯ ಪ್ರಗತಿಯನ್ನು ಪರಿಶೀಲಿಸಿ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ನಮೂನೆಯನ್ನು ಈಗಾಗಲೇ ಅಳವಡಿಸಲಾಗಿದೆ. ಸದರಿ ನಮೂನೆಯಲ್ಲಿನ ಅಂಕಣಗಳಲ್ಲಿ ತಾಲ್ಲೂಕಿನ ಆಯಾ ಭಾಗದ ಕ್ಲಸ್ಟರ್‌ನ ಸಂಪನ್ಮೂಲ ವ್ಯಕ್ತಿಗಳು[ಸಿಆರ್‌ಪಿ] ಶಾಲೆಗಳಿಂದ ಮಾಹಿತಿಯನ್ನು ಪಡೆದು ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ನಮೂದಿಸುವುದು. ತಾಲ್ಲೂಕಿನ/ಬ್ಲಾಕ್‌ನಲ್ಲಿನ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಾಲ್ಲೂಕಿನ ಪ್ರೋಗ್ರಾಮರ್‌ಗಳ ಮೂಲಕ ಮೇಲ್ವಿಚಾರಣೆ ಮಾಡುವುದು.

ಮುಂದುವರೆದು ಈ ಕಾರ್ಯಕ್ರಮವು ಸರ್ಕಾರದ ಪ್ರತಿಷ್ಠಿತ/ವಿದ್ಯಾರ್ಥಿಗಳ ಕಾರ್ಯಕ್ರಮವಾಗಿದ್ದು,ಈ ಪ್ರಕ್ರಿಯೆಯನ್ನು ಜಿಲ್ಲಾ ಉಪನಿರ್ದೇಶಕರ ಕಚೇರಿಗಳಲ್ಲಿಯು ಸಹ ತಮ್ಮ ವ್ಯಾಪ್ತಿಗೊಳಪಡುವ ಎಲ್ಲಾ ತಾಲ್ಲೂಕುಗಳ ಮಾಹಿತಿಯನ್ನು ತಮ್ಮ ಹಂತದಲ್ಲಿ ಪ್ರೋಗ್ರಾಮರ್ ಮೂಲಕ ಕ್ರೋಢೀಕೃತ ಮಾಹಿತಿಯನ್ನು ಮೇಲ್ವಿಚಾರಣೆ ಮಾಡುವುದು.

ಮೇಲ್ಕಂಡ ಪ್ರಕ್ರಿಯೆಯನ್ನು ತಮ್ಮ ವ್ಯಾಪ್ತಿಗೊಳಪಡುವ ವಲಯಗಳಲ್ಲಿ updated ಮಾಹಿತಿಯನ್ನು ಪ್ರತಿ ವಾರದ ಶನಿವಾರದೊಳಗೆ ಕಡ್ಡಾಯವಾಗಿ ನಮೂದಿಸುವುದು.

(ಕೆ.ಎಸ್. ಮಣಿ)
ನಿರ್ದೇಶಕರು
ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ
ನಿರ್ದೇಶಾನಲಯ, ಸಾರ್ವಜನಿಕ ಶಿಕ್ಷಣ ಇಲಾಖೆ.
ಬೆಂಗಳೂರು

ಗೆ.

1. ರಾಜ್ಯದಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಸರ್ಕಾರಿ ಶಾಲಾ ಮುಖ್ಯಸ್ಥರಿಗೆ (ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

**ಪ್ರತಿಗಳನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸುತ್ತಾ ಸೂಕ್ತ ಮೇಲ್ವಿಚಾರಣೆ ನಡೆಸಲು ತಿಳಿಸಿದೆ.**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗ ವಿಭಾಗ.
2. ಆಯುಕ್ತರ ಆಪ್ತ ಶಾಖೆಗೆ
3. ಕಛೇರಿ ಪ್ರತಿ

f:\shoe and socks 2019-20\a main file.docx